ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿ.ಜೆ.ಎಂ.,
ನ್ಯಾಯಾಲಯ, ಚಿಕ್ಕಮಗಳೂರು.

ಸಿ.ಸಿ.1092/2025

| | | | |
|---|---|---|---|
| ಸಾಕ್ಷಿದಾರರ ಹೆಸರು | : | ಅಬ್ದುಲ್ ಖಾದರ್ | ಪಿ.ಡಬ್ಲ್ಯೂ.1 |
| ತಂದೆಯ ಹೆಸರು | : | ಉಸ್ಮನ್ ಕಾಕಾ | ಸಿ.ಡಬ್ಲ್ಯೂ.1 |
| ವಯಸ್ಸು | : | 50 ವರ್ಷ | |
| ವೃತ್ತಿ | : | ಪಿ.ಎಸ್.ಐ | |
| ವಾಸ | : | ಸೈಬರ್ ಪೊಲೀಸ್ ಠಾಣೆ, ಚಿಕ್ಕಮಗಳೂರು | |

ದಿನಾಂಕಃ 10-11-2025 ರಂದು ಪ್ರಮಾಣ ವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಅಭಿಯೋಜನೆ ಪರ ಮಾನ್ಯ ಎಪಿಪಿ ರವರಿಂದಃ-

ನಾನು ದಿಃ31.12.2024 ರಿಂದ ಇಲ್ಲಿಯವರೆಗೂ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಪಿ.ಎಸ್.ಐ ಆಗಿ ಕರ್ತವ್ಯ ನಿರ್ವಹಿಸುತ್ತಿದ್ದೇನೆ.

ದಿಃ23.04.2025 ರಂದು ಸಂಜೆಃ06.45 ಗಂಟೆಗೆ ನಾನು ಠಾಣೆಯಲ್ಲಿ ಇದ್ದಾಗ ಚಿಕ್ಕಮಗಳೂರು ತಾಲ್ಲೂಕು, ಅರಿಶಿಣಗುಪ್ಪೆ ಗ್ರಾಮದ ಮಾವಿನಹಳ್ಳಿಯ ಏಸುರವರ ಅಂಗಡಿಯ ಮುಂಭಾಗದ ಸಾರ್ವಜನಿಕ ರಸ್ತೆಯ ಬದಿಯಲ್ಲಿ ಅಕ್ರಮವಾಗಿ ಮದ್ಯವನ್ನು ಇಟ್ಟುಕೊಂಡು ಹೆಚ್ಚಿನ ಬೆಲೆಗೆ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದಾರೆ ಎಂದು ಬಂದ ಖಚಿತ ವರ್ತಮಾನದ ಮೇರೆಗೆ ಮೇಲಾಧಿಕಾರಿಗಳಿಗೆ ವಿಚಾರವನ್ನು ತಿಳಿಸಿ ಸ್ವಪಿರ್ಯಾದನ್ನು ತಯಾರಿಸಿ ಠಾಣಾ ಮೊಕದಮೆ ಸಂಖ್ಯೆಃ 40/2025 ರ ಕಲಂ 32 ಮತ್ತು 34 ಕೆ.ಇ. ಆಕ್ಟ್ ರಂತೆ

ಪ್ರ.ವ ವರದಿಯನ್ನು ತಯಾರಿಸಿ ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿರುತ್ತೇನೆ.

ಸ್ವಪಿರ್ಯಾದನ್ನು ನೋಡುತ್ತಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-1(ಎ) ಇರುತ್ತದೆ. ಪ್ರ.ವ. ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-2 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-2(ಎ) ಇರುತ್ತದೆ.

ನಂತರ ದಾಳಿಗಾಗಿ ಠಾಣಾ ಸಿಬ್ಬಂದಿಗಳಾದ ಎ.ಎಸ್.ಐ ಜಗದೀಶ್ ನಾಯಕ್, ಪಿ.ಸಿ ರಮೇಶ್, ಪಿ.ಸಿ ಮಹೇಂದ್ರ ರವರ ಜೊತೆಗೆ ಸಂಜೆಃ 07.00 ಗಂಟೆಗೆ ನನ್ನ ಕಾರ್ ನಂ.ಕೆಎ-20/ಎಂಎ-6921 ರಲ್ಲಿ ತನಿಖಾ ಪರಿಕರದೊಂದಿಗೆ ಹೊರಟು ಸಂಜೆಃ08.00 ಗಂಟೆಗೆ ಅರಿಶಿಣಗುಪ್ಪೆ ಗ್ರಾಮದ ಮಾವಿನಹಳ್ಳ ಬಸ್ ನಿಲ್ದಾಣಕ್ಕೆ ತಲುಪಿರುತ್ತೇವೆ. ಬಸ್ ನಿಲ್ದಾಣದ ಬಳಿ ಇದ್ದ ಇಬ್ಬರು ಪಂಚರನ್ನು ಕರೆದು ಪರಿಚಯ ಮಾಡಿಕೊಂಡು ಪಂಚರಾಗಿ ಸಹಕರಿಸಲು ಕೋರಿಕೊಂಡಿದ್ದು ಅವರು ಒಪ್ಪಿಕೊಂಡಿರುತ್ತಾರೆ. ಸದರಿ ಪಂಚರಿಗೆ ನೋಟೀಸ್ ಅನ್ನು ಜಾರಿ ಮಾಡಿರುತ್ತೇನೆ. ಸದರಿ ನೋಟೀಸ್ ಅನ್ನು ನೋಡುತ್ತಿದ್ದು ಅದನ್ನು ನಿಪಿ-3 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-3(ಎ) ಇರುತ್ತದೆ.

ನಂತರ ಪಂಚರು ಹಾಗೂ ಸಿಬ್ಬಂದಿಗಳೊಂದಿಗೆ ಏಸುರವರ ಅಂಗಡಿಯ ಮುಂಭಾಗ ಒಬ್ಬ ವ್ಯಕ್ತಿ ಕೇಸರಿ ಬಣ್ಣದ ಪ್ಲಾಸ್ಟಿಕ್ ಚೀಲದಲ್ಲಿ ಮದ್ಯವನ್ನು ಇಟ್ಟುಕೊಂಡು ಸಾರ್ವಜನಿಕರಿಗೆ ಮಾರಾಟ ಮಾಡುತ್ತಿರುವುದನ್ನು ಖಚಿತಪಡಿಸಿಕೊಂಡು ಸಿಬ್ಬಂದಿಗಳ ಸಹಾಯದಿಂದ ಸದರಿ ವ್ಯಕ್ತಿಯನ್ನು ಹಿಡಿದು ವಿಚಾರಿಸಲಾಗಿ ಆತನು ತನ್ನ ಹೆಸರು ಏಸು, ತಂದೆಯ ಹೆಸರು ಜಾನು ಎಂದು ತಿಳಿಸಿರುತ್ತಾನೆ. ನಂತರ ಆತನು ಬಳಿ ಮದ್ಯ ಮಾರಾಟ ಮಾಡಲು ಪರವಾನಗಿ ಇದೆಯೇ ಎಂದು ವಿಚಾರಿಸಲಾಗಿ ಆತನು ಇರುವುದಿಲ್ಲ ಎಂದು ತಿಳಿಸಿರುತ್ತಾನೆ.

ನಂತರ ಪಂಚರ ಸಮಕ್ಷಮ ಪ್ಲಾಸ್ಟಿಕ್ ಚೀಲದಲ್ಲಿ ಇದ್ದ ಮದ್ಯವನ್ನು ಪರಿಶೀಲಿಸಲಾಗಿ 90 ಎಂ.ಎಲ್.ನ 61 ಒರಿಜಿನಲ್ ಚಾಯ್ಸ್ ವಿಸ್ಕಿಯ ಟೆಟ್ರಾ ಪ್ಯಾಕೇಟ್ ಗಳು ಇರುವುದು ಕಂಡುಬಂದವು. ನಂತರ ಅವುಗಳನ್ನು ಅದೇ ಪ್ಲಾಸ್ಟಿಕ್ ಚೀಲದಲ್ಲಿ ತುಂಬಿ ಅದಕ್ಕೆ ಪಿ ಎಂಬ ಸೀಲಿನೊಂದಿಗೆ ಪಂಚರು ಹಾಗೂ ನನ್ನ ಸಹಿಯುಳ್ಳ ಚೀಟಿಯನ್ನು ಅಂಟಿಸಿರುತ್ತೇವೆ.

ಸದರಿ ಟೆಟ್ರಾ ಪ್ಯಾಕೇಟ್ ಗಳನ್ನು ನೋಡುತ್ತಿದ್ದು ಅದನ್ನು ಮು.ಮಾ.1 ಎಂದು ಹಾಗೂ ಪಾಸ್ಟೀಕ್ ಚೀಲವನ್ನು ಮು.ಮಾ.2 ಎಂದು ಗುರುತಿಸಲಾಯಿತು. ಸದರಿ ಸ್ಥಳದಲ್ಲಿ ಮಹಜರ್ ಅನ್ನು ತಯಾರಿಸಿದ್ದು ಅದನ್ನು ನಿಪಿ-4 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-4(ಎ) ಇರುತ್ತದೆ. ಸ್ಥಳದಲ್ಲಿ ಫೋಟೋವನ್ನು ತೆಗೆದಿದ್ದು ಸದರಿ ಫೋಟೋವನ್ನು ನಿಪಿ-5 ಎಂದು ಗುರುತಿಸಲಾಯಿತು. ಸದರಿ ಫೋಟೋವನ್ನು ಪಿ.ಸಿ. ಮಹೇಂದ್ರ ರವರು ತೆಗೆದಿರುತ್ತಾರೆ. ಮಹಜರ್ ಅನ್ನು ಪಿಸಿ ರಮೇಶ್ ರವರು ಬರೆದಿರುತ್ತಾರೆ. ಸದರಿ ಮಹಜರ್ ಅನ್ನು ಸಂಜೆಃ 08.30 ರಿಂದ 09.30 ರವರೆಗೆ ತಯಾರಿಸಿರುತ್ತೇವೆ. ಸ್ಥಳದಲ್ಲಿ ಆರೋಪಿ ಏಸುರವರಿಗೆ ನೋಟೀಸ್ ಅನ್ನು ನೀಡಿರುತ್ತೇನೆ. ಸದರಿ ಮಹಜರ್ ಗೆ ಪಂಚರು, ನಾನು, ಆರೋಪಿ ಹಾಗೂ ಸಿಬ್ಬಂದಿಯವರು ಸಹಿಯನ್ನು ಹಾಕಿರುತ್ತೇವೆ. ನಂತರ ಸ್ವತ್ತಿನೊಂದಿಗೆ ಠಾಣೆಗೆ ಬಂದು ವರದಿಯನ್ನು ತಯಾರಿಸಿ ಚಾಸಾ-8 ರವರಿಗೆ ನೀಡಿರುತ್ತೇನೆ. ಸದರಿ ವರದಿಯನ್ನು ನೋಡುತ್ತಿದ್ದು ಅದನ್ನು ನಿಪಿ-6 ಎಂದು ಗುರುತಿಸಲಾಗಿ ನನ್ನ ಸಹಿ ನಿಪಿ-6(ಎ) ಇರುತ್ತದೆ. ನಂತರ ಸ್ವತ್ತುಗಳನ್ನು ಮಾಲುಪಟ್ಟಿಯಲ್ಲಿ ಅಳವಡಿಸಿ

ನ್ಯಾಯಾಲಯಕ್ಕೆ ನಿವೇದಿಸಿರುತ್ತೇನೆ. ಈ ದಿನ ನ್ಯಾಯಾಲಯದ ಮುಂದೆ ಇರುವ ಆರೋಪಿಯನ್ನು ನೋಡಿ ಗುರುತಿಸುತ್ತೇನೆ.

ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ-

ನಾನು ಈ ಪ್ರಕರಣದಲ್ಲಿ ದೂರುದಾರನಿರುತ್ತೇನೆ. ನಾನು ದಿಃ23.04.2025 ರಂದು ಠಾಣಾ ಕರ್ತವ್ಯದಲ್ಲಿ ಇದ್ದ ಬಗ್ಗೆ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುವುದಿಲ್ಲ ಎಂದರೆ ಸರಿ. ನಾನು ಅಭಕಾರಿ ಅಧಿಕಾರಿ ಅಲ್ಲ ಹಾಗೂ ಪೊಲೀಸ್ ಅಧಿಕಾರಿ ಎಂದರೆ ಸರಿ. ಅಭಕಾರಿ ಕಾಯ್ದೆ ಕಲಂ 32 ಮತ್ತು 34 ರಡಿಯಲ್ಲಿ ನನಗೆ ಪ್ರಕರಣವನ್ನು ದಾಖಲಿಸಿಕೊಳ್ಳಲು ವಿಶೇಷ ಅಧಿಕಾರ ಇರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿಯು ಮಧ್ಯವನ್ನು ಮಾರಾಟ ಮಾಡುತ್ತಿರುವುದನ್ನು ನಾನು ಕಣ್ಣಾರೆ ನೋಡಿರುತ್ತೇನೆ. ಆರೋಪಿಯ ವಿರುದ್ಧ ಯಾವುದೇ ಹಳೆಯ ಅಭಕಾರಿ ಅಪರಾಧ ಇರುವುದಿಲ್ಲ ಎಂದರೆ ಸರಿ. ಸಾಕ್ಷಿದಾರರು ಸ್ವತಃ ನುಡಿಯುತ್ತಾರೆ ನಮ್ಮ ಠಾಣೆಯಲ್ಲಿ ಇರುವುದಿಲ್ಲ ಎಂದು ನುಡಿಯುತ್ತಾರೆ. ಘಟನಾ ಸ್ಥಳವು ಸಾರ್ವಜನಿಕ ಸ್ಥಳ ಹೌದೋ ಅಲ್ಲವೋ ಎಂದು ನನಗೆ ಖಚಿತವಾಗಿ ತಿಳಿದಿರುವುದಿಲ್ಲ. ಆರೋಪಿಯು ತಾನು ಮಧ್ಯವನ್ನು ಮಾರಾಟ ಮಾಡಿರುವ ಬಗ್ಗೆ ಸ್ವತಃ ನನ್ನ ಮುಂದೆ ಒಪ್ಪಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ.

ಪಂಚರು ನಮ್ಮ ಇಲಾಖೆಗೆ ಪರಿಚಯ ಇರುವಂತಹ ವ್ಯಕ್ತಿಗಳು ಎಂದರೆ ಸರಿಯಲ್ಲ. ನಾವು ಪಂಚರನ್ನು ಹಾಗೂ ಸಿಬ್ಬಂದಿಯವರನ್ನು ಕರೆದುಕೊಂಡು ಯಾವುದೇ ದಾಳಿ ನಡೆಸಿಲ್ಲ ಎಂದರೆ ಸರಿಯಲ್ಲ. ಅದೇ ರೀತಿ ಚಾಸಾ-8 ರವರಿಗೆ ಯಾವುದೇ ರೀತಿಯ ವರದಿಯನ್ನು ಹಾಜರುಪಡಿಸಿರುವುದಿಲ್ಲ ಎಂದರೆ

ಸರಿಯಲ್ಲ. ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಎಲ್ಲಾ ವಿಷಯಗಳು ಸುಳ್ಳು ಇರುತ್ತದೆ ಎಂದರೆ ಸರಿಯಲ್ಲ. ನಮ್ಮ ಇಲಾಖಾ ಅಂಕಿ ಅಂಶಗಳಿಗೋಸ್ಕರ ಆರೋಪಿಯ ವಿರುದ್ಧ ಸುಳ್ಳು ಕೇಸನ್ನು ಹಾಕಿರುತ್ತೇನೆ ಎಂದರೆ ಸರಿಯಲ್ಲ. ಆರೋಪಿಗೂ ಮುದ್ದೆ ಮಾಲಿಗೂ ಯಾವುದೇ ಸಂಬಂಧ ಇಲ್ಲ ಎಂದರೆ ಸರಿಯಲ್ಲ.

<u>ಮರು ವಿಚಾರಣೆಃ ಇಲ್ಲಾ.</u>

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು)
ಓಃಹೇಃಕೇಃಸಃಇಃಎಃಒಃ

ಸಹಿ/-
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು,
ಮತ್ತು ಸಿ.ಜೆ.ಎಂ.,ಚಿಕ್ಕಮಗಳೂರು.

ಎಸ್ಆರ್ಃ